# ಕರ್ನಾಟಕ ವಿಧಾನ ಪರಿಷತ್ತು

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ. ಎನ್. ಮಂಜೇಗೌಡ ಇವರು ನಿಯಮ 72ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಉತ್ತರ.

**ವಿಷಯ:**

ರಾಜ್ಯದ ರೈತರ ಹಿತದೃಷ್ಟಿಯಿಂದ ಯಾವುದೇ ಜಿಲ್ಲಾಧಿಕಾರಿ, ವಿಭಾಗಾಧಿಕಾರಿ, ಹಾಗೂ ತಾಲ್ಲೂಕು ಹಂತದ ತಹಶೀಲ್ದಾರರುಗಳು ತಮ್ಮ ಕಛೇರಿಯಲ್ಲಿ ದಾಖಲಾಗುವ ಆರ್‌ಟಿಸಿ ದಾಖಲೆ/ ಬದಲಾವಣೆಗೆ ಸಂಬಂಧಪಟ್ಟ ಪ್ರಕರಣಗಳನ್ನು ಒಂದು ತಿಂಗಳೊಳಗಾಗಿ ವಿಲೇವಾರಿ ಮಾಡಬೇಕೆಂದು ಮಾನ್ಯ ಕಂದಾಯ ಸಚಿವರು ನಿರ್ದೇಶನ ನೀಡಿದ್ದರೂ ಸಹ ಕೆಲವು ಅಧಿಕಾರಿಗಳು ಸರ್ಕಾರದ ನಿರ್ದೇಶನ / ಸೂಚನೆ/ ಆದೇಶಗಳನ್ನು ಪಾಲಿಸದೇ ವಿಳಂಬ ನೀತಿ ಅನುಸರಿಸುತ್ತಿರುವುದು ಅವರ ಕಾರ್ಯದಕ್ಷತೆಗೆ ಹಿಡಿದ ಕನ್ನಡಿಯಂತಿರುತ್ತದೆ ಹಾಗೂ ಈ ರೀತಿ ವಿಳಂಬ ಧೋರಣೆಯು ಭ್ರಷ್ಟಾಚಾರಕ್ಕೆ ಸಮನಾದುದಾಗಿರುತ್ತದೆ. ಇದಕ್ಕೆ ಅಪವಾದವೆಂಬಂತೆ ತಿಪಟೂರು ಉಪವಿಭಾಗಾಧಿಕಾರಿ ಕಛೇರಿಯಲ್ಲಿ 2023ನೇ ವರ್ಷದ ಸೆಪ್ಟೆಂಬರ್ ತಿಂಗಳಿಂದ ಡಿಸೆಂಬರ್ ತಿಂಗಳುಗಳಲ್ಲೇ ಪ್ರಕರಣಗಳ ವಿಚಾರಣೆ ಮುಕ್ತಾಯವಾಗಿ ಆದೇಶಕ್ಕಾಗಿ ಕಾಯ್ದಿರಿಸಿದ್ದರೂ ಕಳೆದ 10 ತಿಂಗಳಿಂದ ಆದೇಶ ಹೊರಡಿಸದೇ ವಿಳಂಬ ಮಾಡಿ ಕರ್ತವ್ಯ ಲೋಪವೆಸಗಿರುತ್ತಾರೆ. ಆದುದರಿಂದ ಕಂದಾಯ ಸಚಿವರು ಕೂಡಲೇ ಈ ಬಗ್ಗೆ ಗಮನ ಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಹಾಗೂ ಎಷ್ಟು ಪ್ರಕರಣಗಳು ಎಷ್ಟೆಷ್ಟು ತಿಂಗಳಿಂದ ಆದೇಶ ನೀಡದೇ ಕಾಯ್ದಿರಿಸಲಾಗಿದೆ ಎಂಬುವುದರ ಪೂರ್ಣ ವಿವರ ಒದಗಿಸುವಂತೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯಲಾಗಿದೆ.

**ಉತ್ತರ:**

ತಿಪಟೂರು ಉಪ ವಿಭಾಗಾಧಿಕಾರಿ ನ್ಯಾಯಾಲಯದಲ್ಲಿ ಸೆಪ್ಟೆಂಬರ್ 2023 ಮಾಹೆಯಿಂದ ಡಿಸೆಂಬರ್ 2023ರವರಗೆ 541 ಪ್ರಕರಣಗಳು ದಾಖಲಾಗಿದ್ದು, ಹಿಂದಿನ ಪ್ರಕರಣಗಳು ಸೇರಿ ಒಟ್ಟು 609 ಪ್ರಕರಣಗಳನ್ನು ವಿಲೇ ಮಾಡಲಾಗಿರುತ್ತದೆ. ಆದೇಶಕ್ಕಾಗಿ ಕಾಯ್ದಿರಿಸಿದ ಪ್ರಕರಣಗಳ ಪೈಕಿ 2 ಪ್ರಕರಣಗಳನ್ನು ಮರು ವಿಚಾರಣೆಗೆ ಆದೇಶಿಸಲಾಗಿದೆ.

ಪ್ರಕರಣಗಳನ್ನು ಉಭಯಂತ್ರರರ ವಾದ ಆಲಿಸಿ ಸಾಕಷ್ಟು ಕಾಲಾವಕಾಶ ನೀಡಿ ಎರಡೂ ಪಕ್ಷಕಾರರು ಸಲ್ಲಿಸುವ ದಾಖಲೆಗಳನ್ನು ನಿಯಮಾನುಸಾರ ಪರಿಶೀಲಿಸಿ ಸೂಕ್ತ ಆದೇಶ ಹೊರಡಿಸಲಾಗುತ್ತಿದೆ. ಸೆಪ್ಟೆಂಬರ್ 2023ರ ಮಾಹೆಯಿಂದ ಡಿಸೆಂಬರ್ 2023ರವರೆಗೆ ಆದೇಶಕ್ಕೆ ಕಾಯ್ದಿರಿಸಿದ ಎಲ್ಲಾ ಪ್ರಕರಣಗಳನ್ನು ನಿಯಮಾನುಸಾರ ವಿಲೇ ಮಾಡಲಾಗಿರುತ್ತದೆ. ಜೂನ್ 2024ರ ಮಾಹೆಯ ಅಂತ್ಯಕ್ಕೆ ಒಟ್ಟು 60 ಪ್ರಕರಣಗಳನ್ನು ಆದೇಶಕ್ಕೆ ಕಾಯ್ದಿರಿಸಲಾಗಿದೆ.

ರಾಜ್ಯದ ಕಂದಾಯ ನ್ಯಾಯಾಲಯಗಳಲ್ಲಿನ ಪ್ರಕರಣಗಳ ಇತ್ಯರ್ಥಕ್ಕೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 193 ಟಿಆರ್‌ಎಂ 2019, ದಿನಾಂಕ:18.02.2021ರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಆಸ್ತಿಯ ಹಕ್ಕಿನ ಹೊರತಾದ ವಿವಾದಿತ ಪ್ರಕರಣಗಳನ್ನು ತಹಶೀಲ್ದಾರ್‌ರವರು ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 129ರಡಿ ಮೂರು (3) ತಿಂಗಳೊಳಗೆ ಇತ್ಯರ್ಥಪಡಿಸುವಂತೆ ಹಾಗೂ ಸದರಿ ಕಾಯ್ದೆಯ ಕಲಂ 136(2) ಹಾಗೂ 136(3)ರ (ಅಪೀಲು/ಪುನರೀಕ್ಷಣೆ) ಅಡಿಯಲ್ಲಿ ಕ್ರಮವಾಗಿ ಉಪ ವಿಭಾಗಾಧಿಕಾರಿ ಮತ್ತು ಜಿಲ್ಲಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಾಗುವ ಮೇಲ್ಮನವಿ ಪ್ರಕರಣಗಳನ್ನು ಎದುರುದಾರರಿಗೆ ನೋಟೀಸು ನೀಡಿದ ದಿನದಿಂದ ಆರು (06) ತಿಂಗಳ ಒಳಗಾಗಿ ಇತ್ಯರ್ಥಪಡಿಸುವಂತೆ ಕಾಲಮಿತಿ ನಿಗದಿಪಡಿಸಿದೆ.

ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 118 ಟಿಆರ್‌ಎಂ 2023, ದಿನಾಂಕ:15.09.2023ರಲ್ಲಿ ವಾರದ ಪ್ರತಿ ಮಂಗಳವಾರ ಮತ್ತು ಗುರುವಾರಗಳಂದು ತಪ್ಪದೆ ಕಂದಾಯ ಅರೆ ನ್ಯಾಯಿಕ ಪ್ರಕರಣಗಳ ವಿಚಾರಣೆ ನಡೆಸಿ, ಪ್ರಕರಣಗಳ ಶೀಘ್ರ ವಿಲೇವಾರಿ ಮಾಡಲು ಹಲವು ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿದೆ.

ಮುಂದುವರಿದು, ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಬಾಕಿ ಇರುವ ತಕರಾರು ಪ್ರಕರಣಗಳ ಸಂಖ್ಯೆಯು ಹೆಚ್ಚಾಗಿದ್ದಲ್ಲಿ ಅಂತಹ ಕಡೆಗಳಲ್ಲಿ ಪ್ರಕರಣಗಳ ಇತ್ಯರ್ಥಕ್ಕೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ನಿಯಮಗಳು, 1964ರ ನಿಯಮ 43(3) ಮತ್ತು 69ರಲ್ಲಿ "ಅಸಿಸ್ಟೆಂಟ್ ಕಮಿಶನರ್"

ಪದದ ನಂತರ "ಅಥವಾ ಸರ್ಕಾರದಿಂದ ಕಾಲಕಾಲಕ್ಕೆ ಅಧಿಸೂಚಿಸುವ ಅಸಿಸ್ಟೆಂಟ್ ಕಮಿಶನರಿಗೆ ಸಮಾನ ದರ್ಜೆಯ ಅಧಿಕಾರಿ" ಎಂದು ತಿದ್ದುಪಡಿ ಮಾಡಿ ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 13 ಎಲ್‌ಜಿಪಿ 2022, ದಿನಾಂಕ:03.11.2022ರಲ್ಲಿ ಆದೇಶಿಸಲಾಗಿದೆ.

ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು ನಡೆಯುವ ಇಲಾಖಾ ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಕಂದಾಯ ನ್ಯಾಯಾಲಯ ಪ್ರಕರಣಗಳ ಪರಿಶೀಲನೆ ನಡೆಸಿ ಶೀಘ್ರವಿಲೇವಾರಿ ಮಾಡಲು ಸೂಕ್ತ ನಿರ್ದೇಶನಗಳನ್ನು ನೀಡಲಾಗುತ್ತಿದೆ.

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು

ಕಂಇ 124 ಟಿಆರ್‌ಎಂ 2024